ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರವರಿ, 2021

ಅತಿಥಿ ಉಪನ್ಯಾಸಕರುಗಳಿಗೆ ನೇಮಕಾತಿ ಆದೇಶವನ್ನು ನೀಡುವ ಬಗ್ಗೆ

ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :-

127 (132) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳÀನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕೋವಿಡ್ ಕಾರಣದಿಂದ ಸ್ಥಗಿತವಾಗಿದ್ದ ಪ್ರಥಮ ದರ್ಜೆ ಕಾಲೇಜುಗಳು ಯಾವಾಗ ಆರಂಭಗೊಳ್ಳುತ್ತವೆ;

(ಆ) ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ಅತಿಥಿ ಉಪನ್ಯಾಸಕರುಗಳನ್ನು ನೇಮಕಾತಿ ಮಾಡಲಾಗಿದೆಯೇ;

(ಇ) ಇಲ್ಲವಾದಲ್ಲಿ, ಇವರಿಗೆ ಯಾವಾಗ ನೇಮಕಾತಿ ಮಾಡಲಾಗುವುದು?